# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀಮತಿ ಸವಿತಾ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮುದುವತ್ತಿ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ ಇವರ ವಿರುದ್ಧ ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನನ್ವಯ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಸಮ ಸಂಖ್ಯೆಯ ಆದೇಶ ಸಂಖ್ಯೆ: ಗ್ರಾಅಪ/926/ಗ್ರಾಪಂಕಾ/2017, ದಿನಾಂಕ: 06-01-2018.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ಅ.ಸ.ಪ.ಸಂಖ್ಯೆ: UPLOK-2/DE/112/2018/ARE-16, ದಿನಾಂಕ:02-12-2019.
3. ಸರ್ಕಾರದ ಸಮ ಸಂಖ್ಯೆಯ ಎರಡನೇ ಕಾರಣ ಕೇಳುವ ನೋಟೀಸ್ ದಿನಾಂಕ:07-01-2020.
4. ಶ್ರೀಮತಿ ಸವಿತಾ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮುದುವತ್ತಿ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ ರವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ, ದಿನಾಂಕ: 31-01-2020.

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀಮತಿ ಸವಿತಾ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮುದುವತ್ತಿ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ ಇವರ ವಿರುದ್ಧ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14-A ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಯಿತು. ಅದರಂತೆ ಅಪರ ನಿಬಂಧಕರು, ವಿಚಾರಣೆಗಳು-16, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11ರಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ":-**

ಶ್ರೀ ಎಸ್.ಬಿ.ವೆಂಕಟೇಶ್ ಬಿನ್ ಪಾಪಣ್ಣ, ವಕ್ಕಲೇರಿ ಹೋಬಳಿ, ಶೆಟ್ಟಿಕೊತ್ತನೂರು ಗ್ರಾಮ ಮತ್ತು ಅಂಚೆ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ ಇವರು ಲೋಕಾಯುಕ್ತಕ್ಕೆ ಸಲ್ಲಿಸಿದ ತಮ್ಮ ದೂರಿನಲ್ಲಿ ಶ್ರೀಮತಿ ಸವಿತಾ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರವರು ಕೋಲಾರ ಜಿಲ್ಲೆ ಮತ್ತು ತಾಲ್ಲೂಕಿನ ಮುದುವತ್ತಿ ಗ್ರಾಮ ಪಂಚಾಯಿತಿಯಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಕೋಲಾರ ಜಿಲ್ಲೆಯ ಶೆಟ್ಟಿಕೊತ್ತನೂರು ಗ್ರಾಮದ ಖಾತಾ ನಂ.157ರ ಸ್ವತ್ತಿನ ಮುಂಭಾಗದಲ್ಲಿನ 12 ಅಡಿಗಳಷ್ಟು ಅಳತೆಯ ಸಾರ್ವಜನಿಕ ರಸ್ತೆಯ ಒತ್ತುವರಿಯನ್ನು ತೆರವುಗೊಳಿಸಲು ಯಾವುದೇ ಕ್ರಮವನ್ನು ಕೈಗೊಳ್ಳಲು ವಿಫಲರಾಗಿ ಸರ್ಕಾರಿ ನೌಕರನಿಗೆ ತಕ್ಕುದಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ನಡತೆಯನ್ನೆಸಗಿರುತ್ತಾರೆ ಎನ್ನಲಾದ ಆಪಾದನೆಗಳ ಕುರಿತು.

ವಿಚಾರಣಾಧಿಕಾರಿಯವರು, ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ವರದಿಯಲ್ಲಿ ಶ್ರೀಮತಿ ಸವಿತಾ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮುದುವತ್ತಿ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ ಇವರ ವಿರುದ್ಧದ ಆರೋಪವು ಸಾಬೀತಾಗಿರುವುದೆಂದು ನಿರ್ಣಯಿಸಿರುತ್ತಾರೆ. ಸದರಿಯವರ ವಿರುದ್ಧ ಸಾಬೀತಾಗಿರುವ ಆರೋಪಕ್ಕೆ ಅನುಗುಣವಾಗಿ ಸದರಿಯವರು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದಕೊಂಡು ದುರ್ನಡತೆ ಎಸಗಿರುವುದು ಕಂಡುಬರುವ ಹಿನ್ನಲೆಯಲ್ಲಿ ಈ ಆಪಾದಿತ ನೌಕರರುಗಳ ಮೇಲಿನ ಆಪಾದನೆಗಳ ಕುರಿತು ಮಾನ್ಯ ಲೋಕಾಯುಕ್ತರು ಕೆಳಕಂಡಂತೆ ಶಿಫಾರಸ್ಸು ಮಾಡಿರುತ್ತರೆ.

**It is hereby recommended to the Government to impose penalty of 'Withholding two annual increments payable to DGO- Smt. Savitha with cumulative effect.'**

ಈ ಸಂಬಂಧ ಆರೋಪಿತ ನೌಕರರಿಗೆ ನಿಯಮಾನುಸಾರ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವಿಚಾರಣಾ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟಿಸನ್ನು ಜಾರಿಗೊಳಿಸಲಾಗಿತ್ತು. ಈ ನೋಟೀಸಿಗೆ ಆಪಾದಿತ ನೌಕರರು ಮೇಲೆ ಕ್ರಮ ಸಂಖ್ಯೆ (4) ರಲ್ಲಿ ಓದಲಾದ ಮನವಿ ಮೂಲಕ ತಮ್ಮ ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ.

ಆಪಾದಿತ ನೌಕರರಾದ ಶ್ರೀಮತಿ ಸವಿತಾ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮುದುವತ್ತಿ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ ಸಲ್ಲಿಸಿರುವ ಲಿಖಿತ ಹೇಳಿಕೆ/ಸಮಜಾಯಿಷಿಗಳು ಕೆಳಕಂಡಂತೆ ಇರುತ್ತದೆ.

- ದೂರುದಾರರದ ಶ್ರೀ ಎಸ್.ಪಿ. ವೆಂಕಟೇಶ್ ರವರು ಶೆಟ್ಟಿಕೊತ್ತನೂರು ಗ್ರಾಮದವರಿದ್ದು, ಖಾತಾ ಸಂಖ್ಯೆ:157 ರ ಸ್ವತ್ತಿಗೆ ಸಂಬಂಧಪಟ್ಟಂತೆ 12 ಅಡಿಗಳಷ್ಟು ರಸ್ತೆ ಇದ್ದು, ಕೆಲವು ಗ್ರಾಮಸ್ಥರು ಅಕ್ರಮವಾಗಿ ಅತಿಕ್ರಮಿಸಿಕೊಂಡು ಕಲ್ಲು ಚಪ್ಪಡಿಗಳನ್ನು ಅಡ್ಡಲಾಗಿ ನಿರ್ಮಿಸಿ, ರಸ್ತೆಯನ್ನು ಸಂಪೂರ್ಣವಾಗಿ ಬಂದ್ ಮಾಡಿರುತ್ತಾರೆಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಕೋಲಾರ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ಕೋಲಾರ ಹಾಗೂ ಜಿಲ್ಲಾಧಿಕಾರಿಗಳಿಗೆ ದೂರು ಸಲ್ಲಿಸಿದ್ದರೂ, ಸಹ ಯಾವುದೇ ಕ್ರಮ ಕೈಗೊಂಡಿರುವುದಿಲ್ಲವೆಂದು ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ರವರಿಗೆ ಸಲ್ಲಿಸಿದ ದೂರು ಸಂಖ್ಯೆ:ಕಂ/ಉಪಲೋಕ್/ಬಿಡಿ–2890/2015 ಡಿ.ಆರ್.ಇ–4 ದಿನಾಂಕ:24.11.2017 ರಲ್ಲಿ ನೊಂದಾಯಿಸಿದ್ದು, ಈ ಬಗ್ಗೆ ತಮಗೆ ವರದಿ ಸಲ್ಲಿಸುವಂತೆ ಸೂಚಿಸದೆ ಮೇರೆಗೆ ತಾವು ನಿಯಮಾನುಸಾರ ನೋಟೀಸ್ ನೀಡಿ ಸ್ಥಳ ತನಿಖೆ ಮಹಜರನ್ನು ದಿನಾಂಕ:18.02.2014 ರಂದು ಮಾಡಿ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ಕೋಲಾರ ರವರಿಗೆ ವರದಿ ಮಾಡಿರುವುದಾಗಿ ಹೇಳಿರುತ್ತಾರೆ. ಅಲ್ಲದೆ ಇದೇ ದೂರಿಗೆ ಸಂಬಂಧಿಸಿದಂತೆ ಮುಖ್ಯಮಂತ್ರಿಗಳ ಅಧೀನ ಕಾರ್ಯದರ್ಶಿ(ಆಡಳಿತ) ಬೆಂಗಳೂರು ರವರು ಜಿಲ್ಲಾ ಪಂಚಾಯತ್ ಕೋಲಾರ ರವರಿಗೆ ನೀಡಿರುವ ಪತ್ರದಂತೆ, ತಾನು ಸಲ್ಲಿಸಿದ ಪರಿಶೀಲನಾ ವರದಿಯನ್ನು ಉಪಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಕೋಲಾರ ರವರಿಗೆ ದಿನಾಂಕ:23.07.2015 ರಂದು ಅವಶ್ಯಕ ದಾಖಲೆಗಳೊಂದಿಗೆ ಮುಂದಿನ ಕ್ರಮಕ್ಕಾಗಿ ಸಲ್ಲಿಸಿರುವುದಾಗಿ ತಿಳಿಸಿರುತ್ತಾರೆ.

- ಮುಂದುವರೆದು, ತಾವು ಸಲ್ಲಿಸಿದ ವರದಿಯ ಆಧಾರದ ಮೇಲೆ ಮೇಲಾಧಿಕಾರಿಗಳಾದ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಕೋಲಾರ ರವರು ಯಾವುದೇ ಕ್ರಮ ಕೈಗೊಳ್ಳದೆ ಇರುವುದರಿಂದ, ತಾನು ಯಾವುದೇ ಕರ್ತವ್ಯ ಲೋಪವಾಗಲೀ ಅಥವಾ ದುರ್ನಡತೆಯಾಗಲಿ ಮಾಡಿರುವುದಿಲ್ಲವೆಂದು ಹೇಳಿರುತ್ತಾರೆ. ಅಲ್ಲದೆ ತಾನು ಒತ್ತುವರಿಯನ್ನು ತೆರವುಗೊಳಿಸುವ ಅಧಿಕಾರಿಯಾಗಿರುವುದಿಲ್ಲವೆಂದು ಮತ್ತು ಕರ್ನಾಟಕ ಸರ್ಕಾರ ಒತ್ತುವರಿಯನ್ನು ತೆರವುಗೊಳಿಸುವ ಪಂಚಾಯತ್ ರಾಜ್ ಇಲಾಖೆ ನಿಯಮಗಳು 2011 ರಂತೆ ಗ್ರಾಮ ಠಾಣಾ ಪ್ರದೇಶದಲ್ಲಿ ತೆರವುಗೊಳಿಸುವ ಅಧಿಕಾರ ಗ್ರಾಮ ಪಂಚಾಯಿತಿಯಿಂದ ವರದಿ ಪಡೆದು, ಕಾರ್ಯನಿರ್ವಾಹಕ ಅಧಿಕಾರಿಗಳು ತಾಲ್ಲೂಕು ಪಂಚಾಯತ್ ರವರು ತೆರವುಗೊಳಿಸುವ ಅಧಿಕಾರ ಹೊಂದಿರುವುದಾಗಿ ತಿಳಿಸಿರುತ್ತಾರೆ ಹಾಗೂ ಸದರಿ ವಿಚಾರಣೆಯಲ್ಲಿ ರಸ್ತೆ ತೆರವುಗೊಳಿಸುವ ಆರೋಪದ ಬಗ್ಗೆ ತಾವು ಸಲ್ಲಿಸಿರುವ ವರದಿ ಮೇರೆಗೆ ದೂರುದಾರರು ಸಲ್ಲಿಸಿರುವ ಆರೋಪಗಳು ನ್ಯಾಯ ಸಮ್ಮತವಾಗಿರುವುದಿಲ್ಲವೆಂದು ಹಾಗೂ ಉದ್ದೇಶಿತ ದಂಡನೆಯನ್ನು ರದ್ದು ಪಡಿಸಲು ಮನವಿ ಮಾಡಿರುತ್ತಾರೆ.

ದೂರುದಾರರು ನೀಡಿರುವ ದೂರಿನಲ್ಲಿರುವ ಅಂಶಗಳನ್ನು ಹಾಗೂ ಆಪಾದಿತ ನೌಕರರು ಸಲ್ಲಿಸಿರುವ ಲಿಖಿತ ಹೇಳಿಕೆ/ ಸಮಜಾಯಿಷಿಗಳನ್ನು ಮತ್ತು ವಿಚಾರಣಾಧಿಕಾರಿಗಳು ವಿಚಾರಣೆ ನಡೆಸಿ ಸಲ್ಲಿಸಿರುವ ವಿಚಾರಣಾ ವರದಿಯ ಮೇಲೆ ಮಾನ್ಯ ಉಪ ಲೋಕಾಯುಕ್ತರು ಮಾಡಿರುವ ಶಿಫಾರಸ್ಸನ್ನು ಪರಿಶೀಲಿಸಿದಾಗ ಕೆಳಕಂಡ ಅಂಶಗಳು ಕಂಡುಬರುತ್ತವೆ.

- ಗ್ರಾಮ ಪಂಚಾಯಿತಿಯ ಯಾವುದೇ ಆಸ್ತಿಗಳ ಮೇಲೆ ಯಾವುದೇ ವ್ಯಕ್ತಿ ಒತ್ತುವರಿಯನ್ನು ಮಾಡಿರುವ ಮಾಹಿತಿ ಯಾವುದೇ ಮೂಲದಿಂದ ಲಭ್ಯವಾದ ಕೂಡಲೇ ಸಂಬಂಧಿಸಿದ ಗ್ರಾಮ ಪಂಚಾಯತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ನಿರ್ಧಿಷ್ಟ ಮಾಹಿತಿಗಳೊಂದಿಗೆ ಸಕ್ಷಮ ಪ್ರಾಧಿಕಾರಿಗೆ (ಕಾರ್ಯನಿರ್ವಾಹಕ ಅಧಿಕಾರಿ) ಅಗತ್ಯ ಕ್ರಮಕ್ಕಾಗಿ 15 ದಿನಗಳೊಳಗಾಗಿ

ವರದಿಯನ್ನು ಸಲ್ಲಿಸುವುದು ಸ್ಪಷ್ಟವಾಗಿ ಹೇಳಲಾಗಿರುತ್ತದೆ. ಆದರೆ ಈ ಪ್ರಕರಣದಲ್ಲಿ ಆಪಾದಿತ ನೌಕರರು ಹಾಜರು ಪಡಿಸಿರುವ ದಾಖಲೆಗಳ ಪ್ರಕಾರ ದೂರುದಾರರು ದಿನಾಂಕ:23.10.2013 ರಂದು ಅರ್ಜಿ ಸಲ್ಲಿಸಿರುತ್ತಾರೆಂಬುದನ್ನು ಒಪ್ಪಿಕೊಂಡಿರುತ್ತಾರೆ. ಸದರಿ ನಿಯಮದನ್ವಯ ಆಪಾದಿತ ನೌಕರು ರವರು ದೂರು ಸಲ್ಲಿಸಿದ 15 ದಿನಗಳೊಳಗಾಗಿ ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸುವಲ್ಲಿ ವಿಫಲರಾಗಿರುವುದು ವಿಚಾರಣಾಧಿಕಾರಿಗಳ ವಿಚಾರಣಾ ವರದಿಯಿಂದ ತಿಳಿದು ಬರುತ್ತದೆ.

ಮೇಲ್ಕಂಡ ಅಂಶಗಳನ್ನು ಪರಿಶೀಲಿಸಲಾಗಿ, ದೂರುದಾರರು ಸಲ್ಲಿಸಿರುವ ದೂರಿನಲ್ಲಿನ ಅಂಶಗಳು, ವಿಚಾರಣಾಧಿಕಾರಿಯವರು ಸಲ್ಲಿಸಿರುವ ವರದಿ ಹಾಗೂ ಆಪಾದಿತ ನೌಕರರು ಸಲ್ಲಿಸಿದ ಲಿಖಿತ ಹೇಳಿಕೆಗಳನ್ನು ಪರಿಶೀಲಿಸಿದಾಗ ಸದರಿಯವರ ಮೇಲಿನ ಆಪಾದನೆಗಳನ್ನು ಕೈಬಿಡಲು ಸೂಕ್ತ/ಸಮಂಜಸ/ಸಮಾಧಾನಕರ ಕಾರಣಗಳು ಕಂಡುಬರುತ್ತಿಲ್ಲವಾದ್ದರಿಂದ ಆಪಾದಿತ ನೌಕರರ ವಿರುದ್ಧದ ವಿಚಾರಣಾ ಪ್ರಕರಣದಲ್ಲಿನ ವಿಚಾರಣಾಧಿಕಾರಿಗಳ ವರದಿ, ತತ್ಸಂಬಂಧಿತ ಮಾನ್ಯ ಉಪ ಲೋಕಾಯುಕ್ತರ ಶಿಫಾರಸ್ಸನ್ನು ಅಂಗೀಕರಿಸಿ, ಶ್ರೀಮತಿ ಸವಿತಾ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮುದುವತ್ತಿ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮೇಲ್ಮನವಿ) ನಿಯಮಗಳು, 1957ರ ನಿಯಮಗಳ ನಿಯಮ 8(iii) ರಡಿ ನಿರ್ದಿಷ್ಟಪಡಿಸಿದಂತೆ **'ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮ ಸಹಿತ ತಡೆಯಿಡಿಯುವ ದಂಡನೆಯನ್ನು'** ವಿಧಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/926/ಗ್ರಾಪಂಕಾ/2017, ಬೆಂಗಳೂರು, ದಿನಾಂಕ:21-01-2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀಮತಿ ಸವಿತಾ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮುದುವತ್ತಿ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮೇಲ್ಮನವಿ) ನಿಯಮಗಳು, 1957ರ ನಿಯಮಗಳ ನಿಯಮ 8(iii) ರಡಿ ನಿರ್ದಿಷ್ಟಪಡಿಸಿದಂತೆ **'ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮ ಸಹಿತ ತಡೆಯಿಡಿಯುವ ದಂಡನೆಯನ್ನು'** ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 21/01/21
(ನವೀನ್ ಕುಮಾರ್.ಬಿ)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತ-2, ರವರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-16, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಕೋಲಾರ ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಕೋಲಾರ, ಕೋಲಾರ ಜಿಲ್ಲೆ.
7. ಶ್ರೀಮತಿ ಸವಿತಾ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮುದುವತ್ತಿ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ
8. ಗಣಕ ಕೋಶ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

********